ಕರ್ನಾಟಕ ಸರ್ಕಾರ

ಆಯುಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು: 560001

ಸಂಖ್ಯೆ: ಆ.ಆ.ಶಾ/ಸ್ವಾ.ದಿನಾಚರಣೆ/2019–20 ದಿನಾಂಕ: 13–08–2019

## ಸುತ್ತೋಲೆ

ವಿಷಯ: ಆಗಸ್ಟ್ 15, ರಂದು ಎಲ್ಲಾ ಶಾಲೆಗಳಲ್ಲಿ ಸ್ವಾತಂತ್ರ್ಯ ದಿನಾಚರಣೆ ಆಚರಿಸುವ ಬಗ್ಗೆ.

********

ಭಾರತವು ಸ್ವಾತಂತ್ರ್ಯ ಹೊಂದಿದ ದಿನವಾದ ಆಗಸ್ಟ್ 15ನೇ ತಾರೀಖಿನಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುವುದು ಭಾರತೀಯರಾದ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾತ ರಹಿತ ಶಾಲೆಗಳಲ್ಲಿ ಆಗಸ್ಟ್ 15 ರಂದು ಕಡ್ಡಾಯವಾಗಿ ಸ್ವಾತಂತ್ರ್ಯ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲು ಸೂಚಿಸಿದೆ. ಸದರಿ ದಿನದಂದು ಯಾವುದೇ ಶಾಲೆಗಳಿಗೆ ರಜೆಯನ್ನು ಘೋಷಿಸದೆ ತಮ್ಮ ತಮ್ಮ ಶಾಲೆಯಲ್ಲಿ ಸ್ವಾತಂತ್ರ್ಯ ದಿನಾಚರಣೆಯನ್ನು ಕಡ್ಡಾಯವಾಗಿ ಆಚರಿಸಬೇಕಾಗಿ ಕಟ್ಟುನಿಟ್ಟಾಗಿ ಸೂಚಿಸಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ನಿರ್ದೇಶಕರು(ಪ್ರೌಢ ಶಿಕ್ಷಣ),
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳ ಮುಖ್ಯ ಶಿಕ್ಷಕರಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ)

ಪ್ರತಿಯನ್ನು:

1. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರು (ಆಡಳಿತ), ಸಾ.ಶಿ.ಇ. ಇವರಿಗೆ ಅಗತ್ಯ ಕ್ರಮಕ್ಕಾಗಿ
2. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಕಳುಹಿಸುತ್ತ ತಮ ವ್ಯಾಪ್ತಿಯ ಎಲ್ಲಾ ಶಾಲೆಗಳಿಗೆ ಸುತ್ತೋಲೆಯನ್ನು ರವಾನಿಸಲು ಸೂಚಿಸಿದೆ, ಹಾಗೂ ತಮ್ಮ ವ್ಯಾಪ್ತಿಯ ಯಾವುದೇ ಶಾಲೆಯಲಿ ಆಗಸ್ಟ್ 15 ರಂದು ರಜೆಯನ್ನು ಘೋಷಣೆ ಮಾಡದೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುವ ಬಗ್ಗೆ ಸೂಕ್ತ ಕ್ರಮ ವಹಿಸಲು ಸೂಚಿಸಿದೆ.